ಮೈಸೂರಿನಲ್ಲಿ ವಿವಿಧ ಇಲಾಖೆಗಳ ರಸ್ತೆಗಳನ್ನು ಮೈಸೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸುವ ಬಗ್ಗೆ

1653 (2242) : ಶ್ರೀ ಹೆಚ್. ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಮೈಸೂರು ಮಹಾನಗರ ಪಾಲಿಕೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳ ರಸ್ತೆಗಳು ಯಾವುವು;

(ಆ) ಈ ರಸ್ತೆಗಳನ್ನು ಅನುದಾನದ ಸಮೇತ ಮೈಸೂರು ಮಹಾನಗರ ಪಾಲಿಕೆಗೆ ಈಗಾಗಲೇ ಬೆಂಗಳೂರಿನಲ್ಲಿರುವ ವ್ಯವಸ್ಥೆಯಂತೆ ಹಸ್ತಾಂತರಿಸುವ ಬಗ್ಗೆ ಸರ್ಕಾರದ ನಿಲುವೇನು: ವಿವರ ಒದಗಿಸುವುದು;

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಮೈಸೂರು ಮಹಾನಗರ ಪಾಲಿಕೆಯ ಕಾರ್ಯವ್ಯಾಪ್ತಿಯಲ್ಲಿ ಒಟ್ಟು 1151 ಕಿ. ಮೀ. ಉದ್ದದ ರಸ್ತೆಗಳು ಇರುತ್ತವೆ. ಇದರಲ್ಲಿ 32 ಕಿ. ಮೀ. ಉದ್ದ ಲೋಕೋಪಯೋಗಿ ಇಲಾಖೆಗೂ ಹಾಗೂ 26 ಕಿ. ಮೀ. ಉದ್ದ ಮೈಸೂರು ಯೂನಿವರ್ಸಿಟಿಗೂ ಸೇರಿರುತ್ತದೆ. ಉಳಿದ 1093 ಕಿ. ಮೀ ಉದ್ದದ ರಸ್ತೆಗಳು ಮೈಸೂರು ಮಹಾನಗರ ಪಾಲಿಕೆಗೆ ಸೇರಿರುತ್ತದೆ.

(ಆ) ಸದ್ಯಕ್ಕೆ ಆ ರೀತಿಯ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ರಾಜ್ಯದಲ್ಲಿ ನಷ್ಟದಲ್ಲಿರುವ ಸಣ್ಣ ಕೈಗಾರಿಕಾ ಘಟಕಗಳ ಬಗ್ಗೆ.

1655 (1911) : ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಣ್ಣ ಕೈಗಾರಿಕಾ ಘಟಕಗಳಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ನಷ್ಟದಲ್ಲಿರುವ ಸಣ್ಣ ಕೈಗಾರಿಕಾ ಘಟಕಗಳು ಎಷ್ಟು;